# ಉದಾತ್ತ ಚಿಂತನೆಗಳು

## ೧. ಕ್ರಿಯಾ ಸ್ವಾತಂತ್ರ್ಯ ಎಂದರೇನು ?

ಉತ್ತರ : ಕ್ರಿಯಾ ಸ್ವಾತಂತ್ರ್ಯವೆಂದರೆ, ತಮಗೆ ಇಷ್ಟ ಬಂದ ಕೆಲಸ ಮಾಡಲು ವ್ಯಕ್ತಿಗೆ ಸ್ವಾತಂತ್ರ್ಯವಿರುವುದು. ಯಾವ ಕೆಲಸದಲ್ಲಿ ಶೋಷಣೆ ಇಲ್ಲವೋ, ಯಾವ ಕೆಲಸದಲ್ಲಿ ಗೌರವವಿದೆಯೋ, ಯಾವ ಕೆಲಸದಲ್ಲಿ ಮನೆ, ಆಹಾರ ಕಳೆದುಕೊಳ್ಳುವ ಭಯವಿರುವದಿಲ್ಲವೋ ಅದು ನಿಜವಾದ ಕ್ರಿಯಾ ಸ್ವಾತಂತ್ರ್ಯವಾಗಿದೆ.

## ೨. ರಾಜಕೀಯ ಸ್ವಾತಂತ್ರ್ಯದ ಮಹತ್ವವೇನು ?

ಉತ್ತರ : ರಾಜಕೀಯದವರಿಗೆ ಸಮಸ್ತ ಅಧಿಕಾರವು ಜನರಿಂದ ಬರುತ್ತದೆ. ತಮ್ಮ ಖಾಸಗಿ ಜೀವನ ಹಾಗೂ ಸಾರ್ವಜನಿಕ ಜೀವನ ಅವರೇ ನಿರ್ವಹಿಸುವ ಸಾಮರ್ಥ್ಯವನ್ನು ಹೊಂದಿರುತ್ತಾರೆ. ಸ್ವಾತಂತ್ರ್ಯವಿರುವುದು ವ್ಯಕ್ತಿಗೆ ಶಾಸನಗಳನ್ನು ಮತ್ತು ಸರ್ಕಾರಗಳನ್ನು ರಚಿಸುವುದರಲ್ಲಿ. ಅದರ ವಿಸರ್ಜನೆಗಳಲ್ಲಿ ಇರುವ ಹಕ್ಕಿನಲ್ಲಿ . ಜನರಿಗೆ ಜೀವನ, ಸ್ವಾತಂತ್ರ್ಯ, ಸಂತೋಷಾನ್ವೇಷಣೆಗಳನ್ನು ಒದಗಿಸಿಕೊಡುವ ಸಲುವಾಗಿ ಸರಕಾರವು ಇರುವುದು. ವಾಸ್ತವವಾಗಿ ರಾಜಕೀಯ ಸ್ವಾತಂತ್ರ್ಯ ಎನ್ನುವದು ಮಾನವ ವ್ಯಕ್ತಿತ್ವ ಮತ್ತು ಸಮಾನತೆಗಳ ತತ್ವದಿಂದ ಅನುಗಮನ ಮಾಡಿದ ತತ್ತ.

## ೩. ಅಂದವಾದ ಬರೆವಣಿಗೆಯ ಬಗ್ಗೆ ಗಾಂಧೀಜಿಯವರ ಅಭಿಪ್ರಾಯವೇನು ?

ಉತ್ತರ : ಗಾಂಧೀಜಿಯವರು ಇಂಗ್ಲೆಂಡ್ ಗೆ ಹೋಗುವವರೆಗೂ ಅಂದವಾದ ಅಕ್ಷರ, ಒಳ್ಳೆಯ ಬರವಣಿಗೆ ಶಿಕ್ಷಣದ ಅವಶ್ಯಕ ಅಂಶವಲ್ಲವೆಂದು ಭಾವಿಸಿದ್ದರು. ಅನಂತರ ದಕ್ಷಿಣ ಆಫ್ರಿಕಾಗೆ ಹೋದಮೇಲೆ ಅಲ್ಲಿ ಸುಶಿಕ್ಷಿತ ಯುವಕರ ಮತ್ತು ವಕೀಲರ ಮುತ್ತು ಪೋಣಿಸಿದಂತಿದ್ದ ಸುಂದರ ಬರವಣಿಗೆ ನೋಡಿ ಅವರಿಗೆ ನಾಚಿಕೆಯೂ, ಪಶ್ಚಾತ್ತಾಪವೂ ಆಯಿತು. ಕೆಟ್ಟ ಅಕ್ಷರದ ಬರವಣಿಗೆ ಅಪೂರ್ಣ ಶಿಕ್ಷಣದ ಚಿಹ್ನೆ ಎಂದು ಅರಿತರು. ತನ್ನ ಬರವಣಿಗೆಯನ್ನು ತಿದ್ದಿಕೊಳ್ಳಲು ಪ್ರಯತ್ನಿಸಿದರಾದರೂ, ಸುಟ್ಟ ಮಡಕೆಗೆ ಹಸಿಮಣ್ಣನ್ನು

FOR KANNADA ಕನ್ನಡಕ್ಕಾಗಿ ಇಲ್ಲಿ ಬನ್ನಿ

ಮೆತ್ತಲು ಸಾಧ್ಯವಿಲ್ಲದ ಹಾಗೆ ಆ ವೇಳೆಗೆ ಕಾಲಮೀರಿ ಹೋಗಿತ್ತು. ಅವರ ಉದಾಹರಣರೆಯಿಂದ ಒಳ್ಳೆಯ ಬರವಣಿಗೆ ಉತ್ತಮ ಶಿಕ್ಷಣದ ಅವಶ್ಯ ಅಂಶವೆಂಬುದು ಪ್ರತಿಯೊಬ್ಬ ಯುವಕ ಯುವತಿಯರು ತಿಳಿದುಕೊಳ್ಳಲಿ ಎಂದು ಅವರು ಹೇಳಿದ್ದಾರೆ.

೪. ‘ ಅನ್‌ಟು ದಿಸ್ ಲಾಸ್ಟ್ ‘ ಕೃತಿ ಗಾಂಧೀಜಿಯವರ ಮೇಲೆ ಯಾವ ಪರಿಣಾಮ ಬೀರಿತು ?

ಉತ್ತರ : ‘ ಅನ್‌ಟು ದಿಸ್ ಲಾಸ್ಟ್ ‘ ಕೃತಿಯು ಗಾಂಧೀಜಿಯವರ ಮನಸ್ಸು ಸೆರೆ ಹಿಡಿಯಿತು. ಆ ಪುಸ್ತಕದಲ್ಲಿ ಹೇಳಿದ್ದ ಧ್ಯೇಯಗಳಿಗನುಸಾರವಾಗಿ ಅವರ ಜೀವನವನ್ನು ಬದಲಾಯಿಸಿ ಕೊಳ್ಳಬೇಕೆಂದು ಅವರು ನಿರ್ಣಯಿಸಿದರು. ‘ ಅನ್‌ಟು ದಿಸ್ ಲಾಸ್ಟ್ ‘ ಪುಸ್ತಕವನ್ನು ಅವರು ’ಸರ್ವೋದಯ’ ಎಂಬ ಹೆಸರಿನಲ್ಲಿ ಗುಜರಾತಿ ಭಾಷೆಗೆ ಅನುವಾದ ಕೂಡ ಮಾಡಿದರು. ಎಲ್ಲರ ಒಳ್ಳೆಯದರಲ್ಲಿಯೇ ನಮ್ಮ ಒಳ್ಳೆಯದು ಅಡಗಿದೆ. ವಕೀಲನ ಕೆಲಸಕ್ಕೆ ಇರುವ ಬೆಲೆಯೇ ಕ್ಷೌರಿಕನ ಕೆಲಸಕ್ಕೂ ಇದೆ. ತಮ್ಮ ಕೆಲಸದಿಂದ ಜೀವನ ನಡೆಸಲು ಎಲ್ಲರಿಗೂ ಸಮಾನವಾದ ಹಕ್ಕಿದೆ. ಶ್ರಮ ಜೀವಿಯಾದ ಉಳುವವನ ಅಥವಾ ಕೈಕಸಬುಗಾರನ ಜೀವನವೇ ಯೋಗ್ಯ ಜೀವನ ಎಂದು ‘ ಅನ್‌ಟು ದಿಸ್ ಲಾಸ್ಟ್ ‘ ಗ್ರಂಥದ ಧ್ಯೇಯಗಳು ಎಂದು ಅವರು ಅರಿತರು.

FOR KANNADA

೫. ವಿವೇಕಾನಂದರ ದೃಷ್ಟಿಯಲ್ಲಿ ದೇಶದ ಪ್ರಗತಿ ಸ್ಥಿರವಾಗುವುದು ಯಾವಾಗ ?

ಉತ್ತರ : ದೇಶದ ಭಾಷೆಯಲ್ಲಿ ಜನರಿಗೆ ಭಾವನೆಗಳನ್ನು ನೀಡಿದರೆ ಅವರು ವಿಷಯ ಗ್ರಹಣ ಮಾಡಿಕೊಳ್ಳಬಲ್ಲರು. ಆದರೆ ಅವರಿಗೆ ಸಂಸ್ಕೃತಿಯ ಅವಶ್ಯಕತೆ ಇದೆ. ಅವರಿಗೆ ಅದನ್ನು ಕೊಡುವ ತನಕ ಅವರ ಪ್ರಗತಿ ಇರಲಾರದು. ಸಂಸ್ಕೃತಿ ಮಾತ್ರ ಆಘಾತವನ್ನು ಸಹಿಸಬಲ್ಲದು. ಕೇವಲ ಜ್ಞಾನ ರಾಶಿಗೆ ಅದನ್ನು ಎದುರಿಸುವ ಶಕ್ತಿ ಇಲ್ಲ. ಜಗತ್ತಿನ ಜ್ಞಾನರಾಶಿಯನ್ನು ಕೊಟ್ಟರೂ ಅದರಿಂದ ಹೆಚ್ಚು ಪ್ರಯೋಜನವಿಲ್ಲ. ಸಂಸ್ಕೃತಿಯನ್ನು ಹೊಂದಿರುವ ಜನರಿಂದ ದೇಶದ ಪ್ರಗತಿ ಸಾಧ್ಯ ಎಂಬುದು ವಿವೇಕಾನಂದರ ದೃಷ್ಟಿ.

೬. ಬಾಳಿನಲ್ಲಿ ತೃಪ್ತಿ ದೊರಕಬೇಕಾದರೆ ಏನು ಮಾಡಬೇಕೆಂಬುದು ವಿವೇಕಾನಂದರ ಅಭಿಪ್ರಾಯ ?

ಉತ್ತರ : ನಮ್ಮ ದೇಶದ ಮತ್ತು ಜಗತ್ತಿನ ಕಲ್ಯಾಣ ನಮ್ಮ ಮೇಲೆಯೇ ನಿಂತಿದೆ ಎಂದು ಭಾವಿಸಿ ಕಾರ್ಯೋನ್ಮುಖರಾಗಬೇಕು. ವೇದಾಂತ ಸಂದೇಶವನ್ನು ಪ್ರತಿ ಮನೆಗೂ ಸಾರಿ, ಪ್ರತಿಯೊಂದು ಆತ್ಮದಲ್ಲಿ ಇರುವ ಸುಪ್ತ ಪಾವಿತ್ರ್ಯವನ್ನು ಜಾಗೃತಿಗೊಳಿಸಿರಿ. ನಾವು ಸಣ್ಣ ಸಾಧನೆ ಮಾಡಿದರೂ, ಆದರ್ಶ ಬಾಳಿಗಾಗಿ ದುಡಿದು, ಮಡಿದಿದ್ದೇವೆ ಎಂಬ ತೃಪ್ತಿಯಾದರೂ ಇರುತ್ತದೆ ಎಂದು ವಿವೇಕಾನಂದರೂ ಅಭಿಪ್ರಾಯಪಟ್ಟಿದ್ದಾರೆ.

FOR KANNADA
ಕನ್ನಡಕ್ಕಾಗಿ ಇಲ್ಲಿ ಬನ್ನಿ